ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು-572 103
ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ: ತು.ವಿ:ಸಾವಿ:ಮ.ವ/15:ದ.ಆ:2019-20/ 2096 ದಿನಾಂಕ: 19.08.2019

## ಮರು ದರಪಟ್ಟಿ ಆಹ್ವಾನ

ವಿಷಯ: ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಮಹಿಳಾ ವಸತಿನಿಲಯಕ್ಕೆ ಸಿ.ಸಿ.ಟಿ.ವಿ ಕ್ಯಾಮರಾಗಳನ್ನು ಸರಬರಾಜು ಮಾಡಿ ಅಳವಡಿಸಲು ದರಪಟ್ಟಿ ಆಹ್ವಾನಿಸಿರುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 19.08.2019 ಕಂಡಿಕೆ (43).

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಮಹಿಳಾ ವಸತಿನಿಲಯಕ್ಕೆ ಸಿ.ಸಿ.ಟಿ.ವಿ ಕ್ಯಾಮರಾಗಳನ್ನು ಸರಬರಾಜು ಮಾಡುವುದಕ್ಕಾಗಿ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.
ಅಗತ್ಯವಿರುವ ಸಿ.ಸಿ.ಟಿ.ವಿ ಕ್ಯಾಮರಾಗಳ ಸಂರಚನೆ ವಿವರಗಳು ಈ ಕೆಳಕಂಡಂತಿರುತ್ತವೆ.

| ಕ್ರ.ಸಂ. | ಸಿ.ಸಿ.ಟಿ.ವಿ ಕ್ಯಾಮರಾಗಳ ಹೆಸರು ಮತ್ತು ಸಂರಚನೆ | ಪ್ರಮಾಣ | ಕಂಪನಿ ಹೆಸರು ಇದ್ದಲ್ಲಿ ನಮೂದಿಸುವುದು ಅಥವಾ ಇಲ್ಲದಿದ್ದಲ್ಲಿ ಕಂಪನಿ ರಹಿತ ಎಂದು ನಮೂದಿಸುವುದು. | ಪ್ರತಿ ಒಂದಕ್ಕೆ ದರ ಗಳನ್ನು ನಮೂದಿಸುವುದು. (Price Per Unit) |
|---|---|---|---|---|
| 01 | **IP Cameras (HIKVISION)**<br>**Specification:**<br>Type of camera : Bullet camera<br>IP camera:Yes<br>Image Sensor type: CMOS<br>Image Sensor Size: 0.357 inch<br>Camera image Sensing capacity: 2MP<br>Resolution:Full HD (1920 x 1080 pixel)<br>Day/Night capable:Yes<br>IR Illumination range(mtr):50<br>Lens Type:Motorized Varifocal<br>Focal length (mm):2.8-12<br>Frame Rate(fps):30<br>Iris Control:Yes<br>Focus Mode:Zooming<br>Vidio compression:H.264<br>Vidio streaming:dual compressed stream<br>Digital Zoom :16x<br>Audio support:yes<br>Audio Compression:G.726<br>Audio streaming:One-Way<br>Number of Audio input Channel:1<br>Number of Audio output Channel:1<br>Alarm support:Yes<br>Number of Alarm Digital input:1<br>Number of Alarm Digital output:1<br>Multi level User ID/Password:Yes<br>Minimum illumination for capturing color image:0.01 lux<br>WDR(Wide dynamic Range):DWDR<br>SNR:40-50<br>Installation type:Indoor, outdoor<br>Material of the Housing: Alluminium<br>**Additional Specification see Annexure -01** | 02 | | |

ಷರತ್ತುಗಳು:

1. ಲಕೋಟೆಯ ಮೇಲೆ "ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಮಹಿಳಾ ವಸತಿನಿಲಯಕ್ಕೆ ಸಿ.ಸಿ.ಟಿ.ವಿ ಕ್ಯಾಮರಾಗಳನ್ನು ಸರಬರಾಜು ಮಾಡುವ ಕುರಿತು" ಎಂದು ನಮೂದಿಸತಕ್ಕದ್ದು.
2. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 30 ದಿನಗಳ ಅವಧಿಯವರೆಗೆ ಚಾಲ್ತಿಯಲ್ಲಿರಬೇಕು.

3. ಸರಬರಾಜು ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಕಡ್ಡಾಯವಾಗಿ ಲಗತ್ತಿಸಬೇಕು.
4. ಸರಬರಾಜು ಸಂಸ್ಥೆಯವರು ಅಧಿಕೃತ ಮಾರಾಟಗಾರರು/ಸರಬರಾಜುದಾರರು/ತಯಾರಕರು ಆಗಿದ್ದಲ್ಲಿ ದಾಖಲೆಗಳನ್ನು ಲಗತ್ತಿಸುವುದು.
5. ಸಿ.ಸಿ.ಟಿ.ವಿ ಕ್ಯಾಮರಾಗಳನ್ನು ಸರಬರಾಜು ಮಾಡಿ ಬಿಲ್ಲನ್ನು ಸಮುಚ್ಚಿತ ಮಾರ್ಗದಲ್ಲಿ ಪೂರಕ ದಾಖಲೆಗಳೊಂದಿಗೆ ಸಲ್ಲಿಸಿದ 30 ದಿನಗಳೊಳಗೆ ಬಿಲ್ಲನ್ನು ಪಾವತಿಸಲಾಗುವುದು.
6. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 30.08.2019 ಸಂಜೆ 5–30.
7. ದರಪಟ್ಟಿಯನ್ನು ದಿನಾಂಕ:–31.08.2019ರಂದು ಮಧ್ಯಾಹ್ನ 12–30ಕ್ಕೆ ತೆರೆಯಲಾಗುವುದು. ದರಪಟ್ಟಿಗಳನ್ನು **ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್. ರಸ್ತೆ, ತುಮಕೂರು–572 103** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರಿಯಾಗುವುದಿಲ್ಲ.
8. ದರಪಟ್ಟಿಗಳನ್ನು ಯಾವುದೇ ಹಂತದಲ್ಲಿ ಕಾರಣ ನೀಡದೇ ಅಂಗೀಕರಿಸುವ ಅಥವಾ ಖರೀದಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
9. ವಿಶ್ವವಿದ್ಯಾನಿಲಯವು ಒಂದು ವೇಳೆ ತಮ್ಮ ದರಪಟ್ಟಿಯನ್ನು ತಾತ್ಕಾಲಿಕವಾಗಿ ಅಂಗೀಕರಿಸಿದ್ದಲ್ಲಿ ಮಾದರಿ ಸಿ.ಸಿ.ಟಿ.ವಿ ಕ್ಯಾಮರಾಗಳನ್ನು ಪ್ರಚುರಪಡಿಸತಕ್ಕದ್ದು ಮತ್ತು ಮಾದರಿಗಳು ಅನುಮೋದನೆಯಾದ ನಂತರ ಸರಬರಾಜು ಆದೇಶ ನೀಡಲಾಗುವುದು.
10. ತಮ್ಮ ದರಪಟ್ಟಿಯಲ್ಲಿ ಪ್ರತಿ ಸಿ.ಸಿ.ಟಿ.ವಿ ಕ್ಯಾಮರಾವಾರು ದರಗಳನ್ನು ನಮೂದಿಸುವುದು. (ಎಲ್ಲಾ ತೆರಿಗೆ ಮತ್ತು ಸರಬರಾಜು ವೆಚ್ಚ, ಅಳವಡಿಸುವಿಕೆ ವೆಚ್ಚವನ್ನು ಒಳಗೊಂಡಿರತಕ್ಕದ್ದು.)
11. ತಮ್ಮ ಸಂಸ್ಥೆಯು ಸರಬರಾಜು ಮಾಡಲು ಉದ್ದೇಶಿಸಿರುವ ಸಿ.ಸಿ.ಟಿ.ವಿ ಕ್ಯಾಮರಾವಾರು ದರಗಳ ಸಂರಚನೆಗಳಲ್ಲಿ ವ್ಯತ್ಯಾಸ ಇದ್ದರೆ ಸಂರಚನೆಗಳ ಮಾಹಿತಿ/ಮಾದರಿ ಸಂಖ್ಯೆಗಳನ್ನು ದರಪಟ್ಟಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸುವುದು.
12. ಈ ದರಪಟ್ಟಿಯು ರೂಪಾಯಿ ಒಂದು ಲಕ್ಷಕ್ಕೆ ಮಿತಿಗೊಳಪಟ್ಟಿರುತ್ತದೆ ಮತ್ತು ಅಗತ್ಯವಿರುವ ಪ್ರಮಾಣಗಳನ್ನು ಸರಬರಾಜು ಆದೇಶದಲ್ಲಿ ನೀಡಲಾಗುವುದು.
13. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
14. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ಇವರನ್ನು ಸಂಪರ್ಕಿಸಬಹುದು.

ಕುಲಸಚಿವರು 20/08

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
2. ರಕ್ಷಣಾ ಪ್ರತಿ.